ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 21ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ
ಆ) **ವರ್ಗಾವಣೆಗೊಂಡ ಪ್ರಶ್ನೆ:–**		
ದಿನಾಂಕ: 15.12.2021ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ರಘುಪತಿ ಭಟ್ ಕೆ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 38(609)	:	ಮಾನ್ಯ ಮುಖ್ಯಮಂತ್ರಿಯವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ

2. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಿ.ಸಿ. ಪಾಟೀಲ್ (ಮಾನ್ಯ ಕೃಷಿ ಸಚಿವರು) ಅವರು:–

ಅ) 2021ನೇ ಸಾಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಬಿ.ಎ. ಬಸವರಾಜ (ಮಾನ್ಯ ನಗರಾಭಿವೃದ್ಧಿ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಡಾ. ಕೆ. ಸುಧಾಕರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು) ಅವರು:–**
   ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು) ಅವರು:–**
   ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಬೆಳ್ಳಿ ಪ್ರಕಾಶ್, ಆರ್. ಮಂಜುನಾಥ್, ಶ್ರೀಮತಿ ಕೆ. ಪೂರ್ಣಿಮ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಗೊಲ್ಲ ಸಮುದಾಯದ ಕಾಡುಗೊಲ್ಲ ಉಪ ಪಂಗಡಗಳನ್ನು ಎಸ್.ಟಿ. ಸಮುದಾಯಕ್ಕೆ ಸೇರಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಕೆ.ಆರ್. ರಮೇಶ್ ಕುಮಾರ್, ಹೆಚ್.ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಡಾ. ಅಜಯ್ ಧರ್ಮಸಿಂಗ್ ಹಾಗೂ ಇತರರು** – ಕೋವಿಡ್ ಸಂದರ್ಭದಲ್ಲಿ ರಾಜ್ಯದಲ್ಲಿ ಎ.ಪಿ.ಎಂ.ಸಿ. ಕಾಯ್ದೆ, ಭೂ ಸುಧಾರಣಾ ಕಾಯ್ದೆ ಮತ್ತು ಜಾನುವಾರು ಹತ್ಯಾ ನಿಷೇಧ ಕಾಯ್ದೆಗಳನ್ನು ಹಿಂಪಡೆಯಬೇಕೆಂದು ರೈತರು ಪ್ರತಿಭಟಿಸುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 3/ ..

5) **ಶ್ರೀಯುತರುಗಳಾದ ಎ.ಎಸ್. ಪಾಟೀಲ್ (ನಡಹಳ್ಳಿ), ಪಿ. ರಾಜೀವ್, ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್, ಸಿದ್ದು ಸವದಿ, ಮಹದೇವಪ್ಪ ಶಿವಲಿಂಗಪ್ಪ ಯಾದವಾಡ ಹಾಗೂ ಇತರರು –** ಕರ್ನಾಟಕ ಏಕೀಕರಣದ ನಂತರ ಕರ್ನಾಟಕ/ಉತ್ತರ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ವ್ಯತ್ಯಾಸ/ ತಾರತಮ್ಯ ಆಗಿರುವ ಬಗ್ಗೆ ಹಾಗೂ ಅದಕ್ಕೆ ಪರಿಹಾರವನ್ನು ಕಂಡುಹಿಡಿಯುವ ಅಗತ್ಯತೆ ಕುರಿತಂತೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಗಮನ ಸೆಳೆಯುವ ಸೂಚನೆಗಳು

1) **ಡಾ. ಜಿ. ಪರಮೇಶ್ವರ್ ಅವರು –** ರಾಜ್ಯದ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳಲ್ಲಿ ವಿಶೇಷವಾಗಿ ಮೀಸಲು ಕ್ಷೇತ್ರಗಳ ಜನರ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮತ್ತು ಗುರಿಯ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಡಾ. ಕೆ. ಶ್ರೀನಿವಾಸಮೂರ್ತಿ ಅವರು –** ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್ ಪೇಟೆ ಠಾಣೆ ವ್ಯಾಪ್ತಿಯಲ್ಲಿ ನಡೆದ ಅಪಘಾತವನ್ನು ಸರಿಯಾಗಿ ವಿಚಾರಣೆ ಮಾಡದೆ ಕಾರು ಚಾಲಕ ಮತ್ತು ಮಾಲೀಕರ ವಿರುದ್ಧ ಅಲ್ಲಿನ ಸಬ್ ಇನ್ಸ್‌ಪೆಕ್ಟರ್ ರವರು ಸುಳ್ಳು ದೂರು ದಾಖಲಿಸಿ ಜೈಲಿಗೆ ಕಳುಹಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

3) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು –** ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳನ್ನು ಹೊಂದಿದ ಐಟಿಐಗಳಿಗೆ State Council Vocational Training ಸಂಯೋಜನೆಯನ್ನು ಸ್ಥಗಿತಗೊಳಿಸಿರುವ ಬಗ್ಗೆ ಹಾಗೂ ಖಾಸಗಿ ಐಟಿಐ ಕಾಲೇಜುಗಳಿಗೆ National Council Vocational Training ಯಿಂದ ಪರಿವೀಕ್ಷಣೆ ನಂತರ ಅನುಮತಿ ಪಡೆದು ವಿದ್ಯಾರ್ಥಿಗಳಿಗೆ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಶರತ್ ಕುಮಾರ್ ಬಚ್ಚೇಗೌಡ ಅವರು –** ಅಕಾಲಿಕ ಮಳೆಯಿಂದಾಗಿ ಹೊಸಕೋಟೆ ತಾಲ್ಲೂಕಿನಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಶಾಲೆಗಳ ನವೀಕರಣ ಮರು ನಿರ್ಮಾಣ ಹಾಗೂ ಇತರೆ ಕಾಮಗಾರಿಗಳ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

5) **ಶ್ರೀ ಕೃಷ್ಣ ಬೈರೇಗೌಡ, ಡಾ.ಅಜಯ್ ಧರ್ಮಸಿಂಗ್, ಶ್ರೀ ಯು.ಟಿ. ಅಬ್ದುಲ್ ಖಾದರ್ ಮತ್ತು ಶ್ರೀ ಈ. ತುಕಾರಾಂ ಅವರುಗಳು –** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಅಭಿವೃದ್ಧಿಗಾಗಿ ನಿಗಮಗಳ ಮುಖಾಂತರ ನೀಡುತ್ತಿದ್ದ ಅನುದಾನವನ್ನು ಹಿಂದಿನ ವರ್ಷಗಳಿಗೆ ಹೋಲಿಸಿದರೆ ತೀವ್ರವಾಗಿ ಕಡಿತಗೊಳಿಸುತ್ತಿರುವುದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಏಳಿಗೆಗೆ ಆಗುತ್ತಿರುವ ಹಿನ್ನಡೆಯ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಪ್ರಸಾದ್ ಅಬ್ಬಯ್ಯ ಅವರು** – ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಸ್ಮಾರ್ಟ್ ಸಿಟಿ ಕಾಮಗಾರಿ ಯೋಜನೆಯು ನಿಧಾನಗತಿಯಿಂದ ಸಾಗುತ್ತಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ ಅವರು** – ಬೆಂಗಳೂರು ನಗರದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವಿವಿಧ ಪ್ರದೇಶಗಳಲ್ಲಿ ನಡೆಯುತ್ತಿರುವ HTUG ಕೇಬಲ್ ಅಳವಡಿಕೆ ಕಳಪೆ ಕಾಮಗಾರಿಯ ಕುರಿತಂತೆ ತನಿಖೆ ನಡೆಸುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ಮತಕ್ಷೇತ್ರದ ಅಡಿಹುಡಿ–ತೊದಲಬಾಗಿ ಏತ ನೀರಾವರಿ ಯೋಜನೆಯ ಸಿಮೆಂಟ್ ಪೈಪುಗಳು ಹಾಳಾಗಿದ್ದು ಹೊಸ ಪಿ.ಎಸ್.ಇ. ಪೈಪುಗಳನ್ನು ಅಳವಡಿಸುವ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

9) **ಶ್ರೀ ಅಶ್ವಿನ್ ಕುಮಾರ್ ಎಂ. ಅವರು** – ತಲಕಾಡು ಹಾಗೂ ಸುತ್ತಮುತ್ತಲಿರುವ ಇತರೆ ಪ್ರವಾಸಿ ಕೇಂದ್ರಗಳ ವೀಕ್ಷಣೆಗೆ ಕೆ.ಎಸ್.ಟಿ.ಡಿ.ಸಿ. ನಿಗಮದ ವತಿಯಿಂದ ಬೆಂಗಳೂರು ನಗರದಿಂದ ಟೂರ್ ಪ್ಯಾಕೇಜ್ ಆಯೋಜಿಸುವ ಬಗ್ಗೆ ಮಾನ್ಯ ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹೆಚ್.ಕೆ. ಕುಮಾರ ಸ್ವಾಮಿ ಅವರು** – ಹಾಸನ ಮಂಗಳೂರು ರಾಷ್ಟ್ರೀಯ ಹೆದ್ದಾರಿ 75 ರಲ್ಲಿ ಎನ್.ಹೆಚ್.ಎ.ಐ. ನಿಂದ ಪುನರ್ ನಿರ್ಮಾಣವಾಗುತ್ತಿರುವ 47 ಕಿ.ಮೀ. ರಸ್ತೆಯ ಕಾಮಗಾರಿಯು ಕಳಪೆಯಿಂದ ಕೂಡಿರುವ ಬಗ್ಗೆ ಹಾಗೂ ಕಾಮಗಾರಿಯನ್ನು ಚುರುಕುಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

11) **ಶ್ರೀಯುತರುಗಳಾದ ಕೆ. ರಘುಪತಿ ಭಟ್, ದಿನಕರ ಕೇಶವ ಶೆಟ್ಟಿ, ಡಿ.ವೇದವ್ಯಾಸ ಕಾಮತ್, ಡಾ. ಭರತ್‌ಶೆಟ್ಟಿ ವೈ., ಸುನಿಲ್ ಬಿಳಿಯಾ ನಾಯಕ್ ಹಾಗೂ ಇತರರು** – ಉಡುಪಿ, ಕೊಡಗು, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮೂರು ಗುಂಟೆಗಿಂತ ಕಡಿಮೆ ವಿಸ್ತೀರ್ಣ ಹೊಂದಿರುವ ಸರ್ವೇ ನಂಬರ್‌ಗಳನ್ನು ಸೃಜಿಸುವುದನ್ನು ತಡೆಹಿಡಿದು ಈ ವಿಸ್ತೀರ್ಣಕ್ಕೆ 11 E ನಕ್ಷೆಗಳನ್ನು ತಯಾರಿಸುವಂತಿಲ್ಲ ಹಾಗೂ ವಿತರಿಸುವಂತಿಲ್ಲ ಎಂದು ಹೊರಡಿಸಲಾಗಿರುವ ಆದೇಶದಲ್ಲಿನ ನಿಯಮವನ್ನು ಸಡಿಲಿಸಿ/ಮಾರ್ಪಡಿಸಿ ಆರ್ಥಿಕವಾಗಿ ಹಿಂದುಳಿದವರು ಮತ್ತು ಸಾಮಾನ್ಯ ವರ್ಗದವರು ವಾಸ್ತವ್ಯದ ಮನೆಗಳನ್ನು ನಿರ್ಮಿಸಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ್ ಅವರು** – ವಿಜಯನಗರ ಜಿಲ್ಲೆ ಹಡಗಲಿ ಪಟ್ಟಣದಲ್ಲಿ ಕನಕ ಭವನ ನಿರ್ಮಾಣ ಮಾಡಲು ದಾನಪತ್ರ ನೊಂದಣಿಯಾಗಿರುವ ಪ್ರಕಾರ ಕುರುಬ ಸಂಘದ ಹೆಸರಿಗೆ ಖಾತೆಯನ್ನು ಮಾಡಲು ಆದೇಶ ನೀಡುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

13) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮಗಳಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು, ಪ್ರಥಮ ದರ್ಜೆ ಕಾಲೇಜು, ಪ್ರಥಮ ದರ್ಜೆ ಮಹಿಳಾ ಕಾಲೇಜು, ಮಹಿಳಾ ಪಾಲಿಟೆಕ್ನಿಕ್, ಮಹಿಳಾ ಗೃಹ ವಿಜ್ಞಾನ ಕಾಲೇಜು ಮತ್ತು ಕಾನೂನು ಕಾಲೇಜುಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲವಾಗುವಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಹಾಗೂ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಕೆ.ಜೆ. ಜಾರ್ಜ್ ಅವರು** – ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿಡಿಎ ವತಿಯಿಂದ ಬಡಾವಣೆಗಳನ್ನು ನಿರ್ಮಿಸುವ ಉದ್ದೇಶಕ್ಕಾಗಿ ಭೂ ಸ್ವಾಧೀನಪಡಿಸಿಕೊಂಡಿರುವ ಜಮೀನುಗಳನ್ನು ನಿಯಮಬಾಹಿರವಾಗಿ ಭೂಸ್ವಾಧೀನದಿಂದ ಡಿನೋಟಿಫಿಕೇಷನ್ ಮಾಡಿರುವುದನ್ನು ರದ್ದುಪಡಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

15) **ಶ್ರೀಮತಿ ರೂಪಕಲಾ ಎಂ. ಅವರು** – ಕೆ.ಜಿ.ಎಫ್. ನಗರದಲ್ಲಿ ಖಾಲಿಯಿರುವ ಪೊಲೀಸ್ ಅಧೀಕ್ಷಕರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

16) **ಶ್ರೀ ಸಿದ್ದು ಸವದಿ ಅವರು** – ತಳವಾರ ಮತ್ತು ಪರಿವಾರ ಸಮಾಜದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

17) **ಶ್ರೀ ಅಭಯ್ ಪಾಟೀಲ್ ಅವರು** – ಕೇಂದ್ರ ರಕ್ಷಣಾ ಇಲಾಖೆಯ ವಶದಲ್ಲಿರುವ ಬೆಳಗಾವಿ ಗ್ರಾಮದ ಸರ್ವೆ ನಂಬರ್ 1034ರಿಂದ 1349ರಲ್ಲಿರುವ ಸರ್ಕಾರಿ ಜಮೀನನ್ನು ರಾಜ್ಯ ಸರ್ಕಾರಕ್ಕೆ ವಾಪಸ್ಸು ಪಡೆದು ಐಟಿ ಪಾರ್ಕ್/ಸೆಮಿ ಕಂಡಕ್ಟರ್ ಪಾರ್ಕ್ ಸ್ಥಾಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಚನ್ನರಾಯಣಪಟ್ಟಣ ತಾಲ್ಲೂಕು ಹಿರೀಸಾವೆ ಹೋಬಳಿ ಎಂ.ಬಿ. ಕಾವಲು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲು ಉದ್ದೇಶಿಸಲಾಗಿರುವ 66/11 ಕೆ.ವಿ. ವಿದ್ಯುತ್ ವಿತರಣ ಕೇಂದ್ರದ ಕಾಮಗಾರಿ ಚಾಲನಾ ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

19) **ಶ್ರೀ ಹರೀಶ್ ಪೂಂಜ ಅವರು** – ಅಡಿಕೆ ಬೆಳೆಯ ಹಳದಿ ರೋಗಕ್ಕೆ ಬಿಡುಗಡೆಯಾಗಿರುವ ಅನುದಾನದ ಬಳಕೆ ಹಾಗೂ ಇದರ ಉಪಯೋಗ ಪಡೆದಿರುವ ಫಲಾನುಭವಿ ರೈತರ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

... 6/ ..

20) **ಶ್ರೀ ಶ್ರೀಮಂತ ಬಾಳಸಾಹೇಬ್ ಪಾಟೀಲ್ ಅವರು** – ಬೆಳಗಾವಿ ಜಿಲ್ಲೆಯ ಕಾಗವಾಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕೆರೆಗಳಿಗೆ ಕೃಷ್ಣಾ ನದಿಯಿಂದ ನೀರು ತುಂಬುವ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

21) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ರಾಜ್ಯದಲ್ಲಿನ ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿ ವ್ಯಾಪ್ತಿಗಳಲ್ಲಿ ಮಾಸ್ಟರ್ ಪ್ಲ್ಯಾನ್ ಮಂಜೂರಾತಿಯಾಗಿಲ್ಲವೆಂದು ಯಾವುದೇ ಭೂ ಪರಿವರ್ತನೆ, ನಕ್ಷೆ ಮತ್ತು ಬಡಾವಣೆಗಳಿಗೆ ಮಂಜೂರಾತಿ ನೀಡದಿರುವುದರಿಂದ ಉದ್ಭವಿಸಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

22) **ಶ್ರೀ ಸಂಜೀವ ಮಟಂದೂರು ಅವರು** – ಕೃಷಿ ಪತ್ತಿನ ಸಹಕಾರಿ ಸಂಘಗಳು ನೀಡುವ ಸಾಲವನ್ನು ನೋಂದಣಿ ಇಲಾಖೆ ಮೂಲಕ ಅಡಮಾನ ಮಾಡಿಕೊಳ್ಳುವ ವ್ಯವಸ್ಥೆಯನ್ನು ಪರಿಷ್ಕರಿಸಿ ಸಹಕಾರ ಸಂಘಗಳ ಮುಖಾಂತರ ಅಡಮಾನ ನೋಂದಣಿ ಮಾಡಿಸಲು ಸಿದ್ಧಪಡಿಸಿರುವ ತಂತ್ರಾಂಶದಿಂದಾಗಿ ಸಾಕಷ್ಟು ಅಡಚಣೆಗಳು ಉಂಟಾಗುತ್ತಿರುವುದರಿಂದ ಕೃಷಿಕರು ಸಾಲ ಪಡೆಯುವಲ್ಲಿ ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

23) **ಶ್ರೀ ಸಾ.ರಾ. ಮಹೇಶ್ ಅವರು** – ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಚುಂಚನಕಟ್ಟೆಯ ಸ್ಥಳೀಯ ಹಾಗೂ ಸುತ್ತಮುತ್ತಲಿನ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಸ್ಥಗಿತಗೊಂಡಿರುವ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಇಲಾಖೆ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

24) **ಶ್ರೀ ಎಂ. ಚಂದ್ರಪ್ಪ ಅವರು** – ವಿಶ್ವೇಶ್ವರಯ್ಯ ಜಲ ನಿಗಮದಿಂದ ಚಿತ್ರದುರ್ಗ, ತುಮಕೂರು, ದಾವಣಗೆರೆ ಜಿಲ್ಲೆಗಳಲ್ಲಿ ಮಂಜೂರಾಗಿರುವ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಯು ಅಪೂರ್ಣವಾಗಿರುವುದರಿಂದ ಆ ಭಾಗದ ಜನರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

25) **ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ ಅವರು** – 6 ರಿಂದ 8ನೇ ತರಗತಿಯ ಪದವೀಧರ ಶಿಕ್ಷಕ ವೃಂದ ಮತ್ತು ನೇಮಕಾತಿ ನಿಯಮದಂತೆ ಪದವಿಯನ್ನು ಪ್ರತಿ ವಿಷಯದಲ್ಲಿ ಕನಿಷ್ಠ ಶೇಕಡ 50 ಅಂಕಗಳನ್ನು ಪಡೆಯಬೇಕೆಂಬ ನಿಯಮದಿಂದ ಶಿಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸುವ ಅವಕಾಶದಿಂದ ಅಭ್ಯರ್ಥಿಗಳು ವಂಚಿತರಾಗುತ್ತಿರುವುದರಿಂದ ನಿಯಮಗಳನ್ನು ಸಡಿಲಿಸುವ ಬಗ್ಗೆ ಹಾಗೂ 6 ರಿಂದ 8ನೇ ತರಗತಿಯ ಪದವೀಧರ ಶಿಕ್ಷಕ ವೃಂದ ಮತ್ತು ನೇಮಕಾತಿ ಪರೀಕ್ಷೆ ಪತ್ರಿಕೆ 2 ಮತ್ತು 3ರಲ್ಲಿ ಕನಿಷ್ಠ ಅಂಕಗಳನ್ನು ಪಡೆಯುವ ನಿರ್ಬಂಧವನ್ನು ತೆಗೆದು ಅರ್ಹತೆ ಆಧಾರದ ಮೇಲೆ ಸಿ.ಇ.ಟಿ. ಮೂಲಕ ನೇಮಕಾತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

... 7/ ..

26) **ಡಾ. ಭರತ್ ಶೆಟ್ಟಿ ವೈ. ಅವರು** – ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರದಲ್ಲಿನ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕುಂಠಿತಗೊಂಡಿರುವ ಸುರತ್ಕಲ್ ಮಾರುಕಟ್ಟೆ ಕಟ್ಟಡ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

27) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಅವರು** – ಬಾಗಲಕೋಟೆ ಜಿಲ್ಲೆಯ ಹುನಗುಂದ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಿಥಿಲಗೊಂಡಿರುವ ಶಾಲಾ ಕಟ್ಟಡಗಳನ್ನು ನಿರ್ಮಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

5. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm